**O.S No**. 94/2023

**<u>ಮಧ್ಯಂತರ ಅರ್ಜಿ ಸಂಖ್ಯೆ 3 ಸಿಪಿಸಿ ಕ್ರಮಾದೇಶ 39 ನಿಯಮ 1 ಮತ್ತು 2 ರ ಮೇಲಿನ ಆದೇಶ:-</u>**

ಈ ದಾವೆಯನ್ನು ವಾದಿಯು, ಪ್ರತಿವಾದಿಯ ವಿರುದ್ಧ ಶಾಶ್ವತ ನಿರ್ಭಂದಕಾಜ್ಞೆ ಪರಿಹಾರವನ್ನು ಕೇಳಿ ಸಲ್ಲಿಸಿರುತ್ತಾರೆ ಜೊತೆಗೆ ಮಧ್ಯಂತರ ಅರ್ಜಿ ಸಂಖ್ಯೆ 3 ನ್ನು ಸಿಪಿಸಿ ಕ್ರಮಾದೇಶ 39 ನಿಯಮ 1 ಮತ್ತು 2 ರಡಿಯಲ್ಲಿ ಸಲ್ಲಿಸಿ ಪ್ರತಿವಾದಿಯು ಅಥವಾ ಅವನ ಕಡೆಯವರು ದಾವಾ ವಿಚಾರಣೆ ಮುಗಿಯುವವರೆಗೆ ದಾವಾ ಸ್ಥಳದಲ್ಲಿ ಬಲಾತ್ಕಾರದಿಂದ ಬೇಲಿ ಕಿತ್ತು ಹಾಕದಂತೆ ತನ್ನ ಪರವಾಗಿ ತಾತ್ಕಾಲಿಕ ನಿರ್ಭಂದಕಾಜ್ಞೆ ಆದೇಶವನ್ನು ಕೋರಿ ಈ ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಮಧ್ಯಂತರ ಅರ್ಜಿ ಸಂಖ್ಯೆ3 ರ ಮೇಲಿನ ವಾದವನ್ನು ಆಲಿಸಲಾಯಿತು. ಮತ್ತು ಸದರಿ ದಾವೆಯಲ್ಲಿನ ದಾಖಲೆಗಳು ಮತ್ತು ಪ್ರಮಾಣ ಪತ್ರವನ್ನು ಪರಿಶೀಲಿಸಲಾಯಿತು. ವಾದಿಯು ಹಾಜರುಪಡಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ, ವಾದಿಯು ಹೂಡಿದ ಈ ದಾವೆಯು ಮೇಲ್ನೋಟಕ್ಕೆ ಸಮ್ಮತವಾದ ದಾವೆಯಾಗಿದೆ ಎಂದು ಕಂಡುಬರುತ್ತದೆ. ಒಂದು ವೇಳೆ, ಮಧ್ಯಂತರ ಅರ್ಜಿಯನ್ನು ತಿರಸ್ಕರಿಸಿದರೆ, ವಾದಿಯು ಪರಿಹಾರ ಪಡೆಯಲು ಮತ್ತೊಂದು ಪ್ರಕ್ರಿಯೆಯಲ್ಲಿ ಭಾಗಿಯಾಗುವ ಸಂಭವ ಉಂಟಾಗಬಹುದು, ಮತ್ತು

ಕಛೇರಿಯಲ್ಲಿ ಪರಿಶೀಲಿಸಲಾಯಿತು, ಯಾವುದೇ ಎಚ್ಚರಿಕೆ ಅರ್ಜಿ (ಕೆವಿಯಟ್) ಇರುವುದಿಲ್ಲ. ಆದ್ದರಿಂದ ಈ ಮುಂದಿನಂತೆ ಆದೇಶಿಸುತ್ತೇನೆ.

**ಆ ದೇ ಶ**

**ಮಧ್ಯಂತರ ಅರ್ಜಿ ಸಂಖ್ಯೆ3 ನ್ನು ಭಾಗಶಃ ಪುರಸ್ಕರಿಸಲಾಗಿದೆ. ಪ್ರತಿವಾದಿಯು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸುವರೆಗೆ ಪ್ರತಿವಾದಿಯು ಅಥವಾ ಅವನ ಕಡೆಯವರು ಈ ದಾವಾ ಸ್ಥಳದಲ್ಲಿ ಬಲಾತ್ಕಾರದಿಂದ ಬೇಲಿ ಕಿತ್ತು ಹಾಕದಂತೆ ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ.**

**ಪ್ರತಿವಾದಿಗೆ ಏಕಪಕ್ಷೀಯ ತಾತ್ಕಾಲಿಕ ನಿರ್ಬಂಧಕಾಜ್ಞೆಯ ಪ್ರತಿ ಮತ್ತು ತುರ್ತು ನೋಟಿಸ್ ರವಾನಿಸಲು ಕಛೇರಿಗೆ ನಿರ್ದೇಶಿಸಲಾಗಿದೆ.**

**ವಾದಿಯು ಸಿ.ಪಿ.ಸಿ. ಕ್ರಮಾದೇಶ 39 ನಿಯಮ 3(ಎ) ಮತ್ತು (ಬಿ) ನಿಯಮಗಳನ್ನು ಪರಿಪಾಲಿಸತಕ್ಕದ್ದು.**

**ಮುಂದಿನ ವಿಚಾರಣೆ ದಿನಾಂಕಃ** 10.07.2023

**ಸಹಿ ಇದೆ/–**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆ.ಎಂ.ಎಫ್.ಸಿ.ಹೊನ್ನಾವರ.**